# ಮೈಸೂರು ವಿಶ್ವವಿದ್ಯಾನಿಲಯ

DOS in Physical Education & Sports Science
University of Mysore
MYSORE - 570 005
No. 73
Date 26/8/2016
Sports Pavilion

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು.05.

ವಿಷಯ: 2016-17ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ, ಇವರ ಪತ್ರ ಸಂಖ್ಯೆ 04/2016-17 ದಿನಾಂಕ 23.6.2016.

***

## ಆದೇಶ ಸಂಖ್ಯೆ: ಇಟಿ2/121/2015-16 ದಿನಾಂಕ 23ನೇ ಆಗಸ್ಟ್ 2016

ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, ದಿನಾಂಕ 18-07-2016 ರಿಂದ ಜಾರಿಗೆ ಬಂದಂತೆ 2016-17ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗದಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಗಿನಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|
| ಶ್ರೀ.ದೇವರಾಜು.ಸಿ.ಟಿ ಅತಿಥಿ ಉಪನ್ಯಾಸಕರು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ, ಮೈ.ವಿ.ವಿ | ದೈಹಿಕ ಶಿಕ್ಷಣ | 12 | ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ | ರೂ.22.500/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

25/8/16

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ನೀಡಿದ 7 ದಿನಗಳೊಳಗೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು 2016-17ನೇ ಸಾಲಿನ ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸುವುದು.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿಉಪನ್ಯಾಸಕರುಗಳುಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.